## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 569

ಸದಸ್ಯರ ಹೆಸರು : ಶ್ರೀ ಎನ್.ಎಸ್.ಭೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13.12.2018

ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

**********

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿರುವ ರೈತರುಗಳ ಪಂಪ್‌ಸೆಟ್‌ಗಳಿಗೆ ದಿನಕ್ಕೆ ಅಂದರೆ ಕನಿಷ್ಠ ಹತ್ತು ತಾಸು ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ರಾಯಚೂರು ಜಿಲ್ಲೆಯಲ್ಲಿರುವ ರೈತರ ಪಂಪ್‌ಸೆಟ್‌ಗಳಿಗೆ ಪ್ರಸ್ತುತ, ಸರ್ಕಾರದ ಆದೇಶದಂತೆ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ. |
| ಆ) | ರಾಯಚೂರು ನಗರದಲ್ಲಿ ಬರುವ ಕಾಡ್ಲೂರು, ಆಶಾಪೂರ್ ಹಾಗೂ ಮಾನ್ವಿ ತಾಲ್ಲೂಕಿನಲ್ಲಿ ಬರುವ ಹರವಿ ಹತ್ತಿರ 110/11 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ತಾಲೂಕಿನ ಆಶಾಪೂರ್ ರೋಡ್, ಕಾಡ್ಲೂರು ಮತ್ತು ಮಾನ್ವಿ ತಾಲೂಕಿನ ಹರವಿ ಗ್ರಾಮದಲ್ಲಿ 110 ಕೆ.ವಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ಅನುಮೋದನೆ ನೀಡಲಾಗಿರುತ್ತದೆ.<br><br>ಆಶಾಪೂರ್ ರೋಡ್‌ನಲ್ಲಿ 110 ಕೆ.ವಿ ವಿದ್ಯುತ್ ಉಪಕೇಂದ್ರದ ಸ್ಥಾಪನೆಗೆ ಅಗತ್ಯವಿರುವ ಸರ್ಕಾರಿ ಜಮೀನಿನ ಮಂಜೂರಾತಿಗಾಗಿ ಜಿಲ್ಲಾಧಿಕಾರಿಗಳು, ರಾಯಚೂರು ರವರನ್ನು ಕೋರಲಾಗಿದೆ. ಕಾಡ್ಲೂರು ಮತ್ತು ಹರವಿ ಗ್ರಾಮಗಳಲ್ಲಿ 110 ಕೆ.ವಿ ವಿದ್ಯುತ್ ಉಪಕೇಂದ್ರದ ಸ್ಥಾಪನೆಗೆ ಅಗತ್ಯವಿರುವ ಭೂಮಿ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

ಸಂಖ್ಯೆ: ಇಎನ್ 236 ಇಬಿಎಸ್ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ